## ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆಗುರುತಿಲ್ಲದ ಪ್ರಶ್ನೆ ಸಂಖ್ಯೆ : **06 (215)**

ಸದಸ್ಯರ ಹೆಸರು : ಶ್ರೀ ಅಲ್ಲಂ ವೀರಭದ್ರಪ್ಪ (ವಿಧಾನ ಸಭೆಯಿಂದ ಚುನಾಯಿತರಾದವರು)

ಉತ್ತರಿಸಬೇಕಾದ ದಿನಾಂಕ : 13.09.2021

ಉತ್ತರಿಸುವ ಸಚಿವರು : ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು

| ಕ್ರ.ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ಕೋವಿಡ್-19 ಮತ್ತು 3ನೇ ಅಲೆಯ ಸಂಭವದ ನಡುವೆ ಸರ್ಕಾರವು ಶಾಲಾ-ಕಾಲೇಜುಗಳನ್ನು ಆರಂಭ ಮಾಡಿದ್ದು, ಮಕ್ಕಳ ಆರೋಗ್ಯ ಮತ್ತು ಸುರಕ್ಷತೆ ದೃಷ್ಟಿಯಿಂದ ಯಾವ ಯಾವ ಮುನ್ನೆಚ್ಚರಿಕೆ ಕ್ರಮಗಳನ್ನು ಕೈಗೊಂಡಿದೆ. | • ಸನ್ಮಾನ್ಯ ಮುಖ್ಯಮಂತ್ರಿಗಳ ಅಧ್ಯಕ್ಷತೆಯಲ್ಲಿ ನಡೆದ ಆರೋಗ್ಯ ಇಲಾಖೆಯ ಕೋವಿಡ್-19 ತಾಂತ್ರಿಕ ಸಲಹಾ ಸಮಿತಿಯೊಂದಿಗೆ ದಿನಾಂಕ:06/08/2021, 14/08/2021 ಮತ್ತು 30/08/2021 ರಂದು ನಡೆದ ಸಭೆಗಳಲ್ಲಿ ಕೈಗೊಂಡ ನಿರ್ಣಯದಂತೆ ರಾಜ್ಯದಲ್ಲಿನ ಸರ್ಕಾರಿ, ಅನುದಾನಿತ ಮತ್ತು ಅನುದಾನ ರಹಿತ ಶಾಲೆಗಳಲ್ಲಿ ಮೊದಲ ಹಂತದಲ್ಲಿ ದಿನಾಂಕ:23/08/2021 ರಿಂದ 9 ಮತ್ತು 10ನೇ ತರಗತಿಗಳನ್ನು ಹಾಗೂ ಎರಡನೇ ಹಂತದಲ್ಲಿ ದಿನಾಂಕ:06/09/2021 ರಿಂದ 6 ರಿಂದ 8ನೇ ತರಗತಿಗಳನ್ನು ವಿದ್ಯಾರ್ಥಿಗಳಿಗೆ ಭೌತಿಕವಾಗಿ ತೆರೆಯಲು ಕ್ರಮಕೈಗೊಳ್ಳಲಾಗಿದೆ. ಶಾಲೆಗಳನ್ನು ಭೌತಿಕವಾಗಿ ಪ್ರಾರಂಭಿಸಲು ಅನುಸರಿಸಬೇಕಾದ ಪ್ರಮಾಣಿತ ಕಾರ್ಯಾಚರಣೆ ವಿಧಾನ(ಎಸ್‌ಓಪಿ) ಯನ್ನು ದಿನಾಂಕ:16/08/2021 ರಂದು ಹೊರಡಿಸಲಾಗಿದ್ದು, ಸದರಿ ನಿಯಮಗಳನ್ನು ಕಟ್ಟುನಿಟ್ಟಾಗಿ ಅನುಸರಿಸುವಂತೆ ಎಲ್ಲಾ ಉಪನಿರ್ದೇಶಕರು (ಆಡಳಿತ) & (ಅಭಿವೃದ್ಧಿ), ಕ್ಷೇತ್ರ ಶಿಕ್ಷಣಾಧಿಕಾರಿಗಳಿಗೆ ಜ್ಞಾಪನದ ಮೂಲಕ ತಿಳಿಸಲಾಗಿದೆ.<br>• ರಾಜ್ಯದ ಎಲ್ಲಾ ಸರ್ಕಾರಿ, ಅನುದಾನಿತ ಮತ್ತು ಅನುದಾನ ರಹಿತ ಶಾಲೆಗಳ ಶಿಕ್ಷಕರು ಮತ್ತು ಬೋಧಕ/ ಬೋಧಕೇತರ ಸಿಬ್ಬಂದಿಗಳಿಗೆ ಲಸಿಕೆಯನ್ನು ಆದ್ಯತೆ ಮೇರೆಗೆ ನೀಡಲಾಗುತ್ತಿದೆ. ಇದುವರೆಗೂ ಶೇ.95ರಷ್ಟು ಶಿಕ್ಷಕರು ಲಸಿಕೆ ಪಡೆದಿರುತ್ತಾರೆ. ಆರೋಗ್ಯ ಇಲಾಖೆಯ ನಿರ್ದೇಶಾನುಸಾರ ಈವರೆಗೆ ಲಸಿಕೆ ಪಡೆಯದ ಶಿಕ್ಷಕರು ಮತ್ತು ಬೋಧಕೇತರ ಸಿಬ್ಬಂದಿಗಳಿಗೆ ಲಸಿಕೆ ಪಡೆದುಕೊಳ್ಳಲು ಈ ಕಛೇರಿ ಪತ್ರ ಸಂಖ್ಯೆ:ಸಿ4(8)ಕೋ-19/ಲಸಿಕಾಕರಣ-01/2021-22. ದಿ:17/08/21 ರನ್ವಯ ರಾಜ್ಯದ ಎಲ್ಲಾ ಜಿಲ್ಲಾ ಉಪನಿರ್ದೇಶಕರು (ಆಡಳಿತ) ರವರುಗಳಿಗೆ ಅಗತ್ಯ ಕ್ರಮಕೈಗೊಳ್ಳಲು ತಿಳಿಸಲಾಗಿದೆ.<br>• ಭೌತಿಕ ಅಂತರವನ್ನು ಕಾಯ್ದುಕೊಳ್ಳಲು ಅನುವಾಗುವಂತೆ ಶಿಕ್ಷಕರು ಮತ್ತು ವಿದ್ಯಾರ್ಥಿಗಳ ಸಂಖ್ಯೆಗಳನ್ನು ಆಧರಿಸಿ ತಂಡಗಳನ್ನಾಗಿ ವಿಂಗಡಿಸಿ ಪಾಠಪ್ರವಚನ ಮಾಡಲು ಮಾರ್ಗಸೂಚಿಯನ್ನು ನೀಡಲಾಗಿದೆ.<br>• ಪೋಷಕರ ಒಪ್ಪಿಗೆಯೊಂದಿಗೆ ವಿದ್ಯಾರ್ಥಿಗಳು ಭೌತಿಕ ತರಗತಿಗೆ ಹಾಜರಾಗಬಹುದು, ವಿದ್ಯಾರ್ಥಿಗಳ ಹಾಜರಾತಿಯನ್ನು ಕಡ್ಡಾಯ ಮಾಡಿರುವುದಿಲ್ಲ. |
| ಆ) | ವಿದ್ಯಾರ್ಥಿ ಮತ್ತು ಪೋಷಕರ ಆತಂಕ ನಿವಾರಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು? | |

| | | |
|---|---|---|
| ಇ) | ಶಾಲಾ ಕಾಲೇಜುಗಳಿಗೆ ಹಾಜರಾಗುವ 14 ವರ್ಷ ಮೇಲ್ಪಟ್ಟ ವಿದ್ಯಾರ್ಥಿ-ವಿದ್ಯಾರ್ಥಿನಿಯರುಗಳಿಗೆ ಸಂಪೂರ್ಣ ಲಸಿಕೆ ನೀಡುವ ಯೋಜನೆ ಹಮ್ಮಿಕೊಂಡು ಕಾರ್ಯಗತಗೊಳಿಸಲಾಗಿದೆಯೇ? | • ಸರ್ಕಾರದ ವತಿಯಿಂದ ಕೋವಿಡ್-19ರ ಸಾಂಕ್ರಾಮಿಕದ ವಿರುದ್ಧ ಲಸಿಕೆಯನ್ನು ನೀಡಲಾಗುತ್ತಿದ್ದು, ಪ್ರಸ್ತುತ 18 ವರ್ಷ ಮೇಲ್ಪಟ್ಟ ವಯಸ್ಸಿನವರಿಗೆ ಮಾತ್ರ ಚುಚ್ಚುಮದ್ದನ್ನು ನೀಡಲಾಗುತ್ತಿದೆ. ಭಾರತ ಸರ್ಕಾರದ ಕೋವಿಡ್-19 ಲಸಿಕಾಕರಣ ಮಾರ್ಗಸೂಚಿಯಂತೆ 18 ವರ್ಷ ಮೇಲ್ಪಟ್ಟವರ ಕೋವಿಡ್ ಲಸಿಕೆ ಪಡೆಯಲು ಅರ್ಹರಿರುತ್ತಾರೆ. ರಾಜ್ಯವು ಕೋವಿಡ್ ಲಸಿಕಾಕರಣಕ್ಕೆ ಸಂಬಂಧಿಸಿದಂತೆ ಕಾಲಕಾಲಕ್ಕೆ ನೀಡುವ ಮಾರ್ಗಸೂಚಿಯನ್ನು ಅನುಷ್ಠಾನಗೊಳಿಸುತ್ತಿದೆ. |

**ಸಂಖ್ಯೆ: ಇಪಿ 69 ಎಲ್‌ಬಿಪಿ 2021**

(ಬಿ.ಸಿ. ನಾಗೇಶ್)
ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ
ಸಚಿವರು